# ಕಿದ್ವಾಯಿ ಆಸ್ಪತ್ರೆಯಲ್ಲಿ ಕನ್ನಡ ವಿರೋಧಿ ನೀತಿ: ಉಗ್ರ ಹೋರಾಟ



Karnataka Rakshana Vedike president Narayan Gowda in argument with a police officer in Bangalore on Tuesday during a protest against the Kidwai Hospital administration. They wanted to change the director of the hospital. —Express photo

## ರಕ್ಷಣಾ ವೇದಿಕೆಯ 30 ಮಂದಿ ಬಂಧನ

[illegible]

ಕಿದ್ವಾಯಿ ಆಸ್ಪತ್ರೆಯಲ್ಲಿ ಕನ್ನಡ ವಿರೋಧಿ ನೀತಿ: ಉಗ್ರ ಹೋರಾಟ



ಕನ್ನಡ ವಿರೋಧಿ ನೀತಿ ಅನುಸರಿಸುತ್ತಿರುವ ಕಿದ್ವಾಯಿ ಆಸ್ಪತ್ರೆ ನಿರ್ದೇಶಕ ಡಾ.ಬ್ಯಾಪ್ಸಿ ಅಮಾನತಿಗೆ ಒತ್ತಾಯಿಸಿ ರಕ್ಷಣಾ ವೇದಿಕೆ ಕಾರ್ಯಕರ್ತ ಪ್ರತಿಭಟನೆ ನಡೆಸಿದರು. ಆ ಸಂದರ್ಭದಲ್ಲಿ ವೇದಿಕೆಯ ಅಧ್ಯಕ್ಷ ನಾರಾಯಣಗೌಡ ಸೇರಿದಂತೆ ಕಾರ್ಯಕರ್ತರನ್ನು ಬಂಧಿಸಲಾಯಿತು.

## ಡಾ.ಬ್ಯಾಪ್ಸಿ ಅಮಾನತಿಗೆ ಒತ್ತಾಯಿಸಿ ಪ್ರತಿಭಟನೆ

ಬೆಂಗಳೂರು, ಜೂ.20 - ಕಿದ್ವಾಯಿ ಆಸ್ಪತ್ರೆಯ ಹಂಗಾಮಿ ನಿರ್ದೇಶಕ ಡಾ.ಪಿ.ಪಿ.ಬ್ಯಾಪ್ಸಿ ಅವರನ್ನು ಅಮಾನತು ಗೊಳಿಸಬೇಕೆಂದು ಒತ್ತಾಯಿಸಿ, ಪ್ರತಿಭಟನೆ ನಡೆಸಿದ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರನ್ನು ವಿಧಾನಸೌಧ ಪೊಲೀಸರು ಮಂಗಳವಾರ ಬಂಧಿಸಿದ್ದಾರೆ.

ವಿಧಾನಸೌಧದ ಸಮೀಪವಿರುವ ಬಸವೇಶ್ವರ ವೃತ್ತದ ಬಳಿ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ನೇತೃತ್ವದಲ್ಲಿ ಕಾರ್ಯಕರ್ತರು ಬೆಳಗ್ಗೆ ಪ್ರತಿಭಟನೆ ನಡೆಸಿದರು.

ವಿಧಾನಮಂಡಲ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ವಿಧಾನಸೌಧದ ಸುತ್ತ ಒಂದು ಕಿ.ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ನಿಷೇಧಾಜ್ಞೆ ಉಲ್ಲಂಘಿಸಿ ಪ್ರತಿಭಟಿಸಿದ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದರು. ನಂತರ ಕಾರ್ಯಕರ್ತರಿಂದ ಮುಚ್ಚಳಿಕೆ ಪಡೆದು ಬಿಡುಗಡೆ ಮಾಡಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.

ಇದಕ್ಕೂ ಮುನ್ನ ವೇದಿಕೆ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಕಿದ್ವಾಯಿ ಆಸ್ಪತ್ರೆಯಲ್ಲಿ ಹಂಗಾಮಿ ನಿರ್ದೇಶಕ ಡಾ.ಪಿ.ಪಿ. ಬ್ಯಾಪ್ಸಿ ದಬ್ಬಾಳಿಕೆ ನಡೆಸುತ್ತಿದ್ದಾರೆ. ಕನ್ನಡಿಗ ಉದ್ಯೋಗಿಗಳಿಗೆ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಕಿದ್ವಾಯಿ ಆಸ್ಪತ್ರೆಯ ನಿರ್ದೇಶಕ ಸ್ಥಾನಕ್ಕೆ ಕನ್ನಡಿಗ ಅಧಿಕಾರಿಯನ್ನು ನೇಮಿಸಬೇಕು. ಅಮಾನತುಗೊಂಡ ನೌಕರರ ಸೇವೆಯನ್ನು ಮುಂದುವರಿಸಬೇಕು ಎಂದು ಆಗ್ರಹಿಸಿದರು.

ಬೆಳಗಾವಿ ಸ್ಥಳೀಯ ಸಂಸ್ಥೆಗಳಿಗೆ ಎಂಇಎಸ್ ಕಾರ್ಯಕರ್ತರ ನೇಮಕ ರದ್ದುಗೊಳಿಸಿ, ಕನ್ನಡ ಕಾರ್ಯಕರ್ತರನ್ನು ನೇಮಿಸಬೇಕು ಎಂದೂ ಒತ್ತಾಯಿಸಿದರು.